ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ಮಾನ್ಯ ಸಭಾಧ್ಯಕ್ಷರು

ಪತ್ರಿಕೆಯ ಹೆಸರು : NAME OF THE NEWS PAPER : ಸಂಯುಕ್ತ ಕರ್ನಾಟಕ ದಿನಾಂಕ : DATE : 04/07/2019


# 'ರಾಜೀನಾಮೆ ಸಲ್ಲಿಸುವವರಿಗೆ ಜ್ಞಾನವಿರಬೇಕು'

4-7-19

ಸಂ.ಕ. ಸಮಾಚಾರ ಬೆಂಗಳೂರು: ಶಾಸಕರಾದವರಿಗೆ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡುವಾಗ ಯಾರಿಗೆ ರಾಜೀನಾಮೆ ನೀಡಬೇಕು ಎಂಬ ಸಾಮಾನ್ಯ ಜ್ಞಾನವಾದರೂ ಇರಬೇಕು ಎಂದು ವಿಧಾನಸಭಾಧ್ಯಕ್ಷ ರಮೇಶ್ ಕುಮಾರ್ ಗರಂ ಆಗಿದ್ದಾರೆ.

ರಾಜ್ಯ ರಾಜಕೀಯದಲ್ಲಿ ನಡೆದ ಕ್ಷಿಪ್ರ ಬೆಳವಣಿಗೆಯಲ್ಲಿ ವಿಜಯನಗರ ಶಾಸಕ ಆನಂದ್ ಸಿಂಗ್ ಹಾಗೂ ಗೋಕಾಕ್ ಶಾಸಕ ರಮೇಶ್ ಜಾರಕಿಹೊಳಿ ತಮ್ಮ ಶಾಸಕ ಸ್ಥಾನಕ್ಕೆ ರಾಜೀನಾಮೆ ನೀಡಿದ್ದರು. ಇದರಿಂದ ಸಿಟ್ಟಾಗಿರುವ ರಮೇಶ್ ಕುಮಾರ್, ಶಾಸಕರಾದವರಿಗೆ ಎಲ್ಲಿ ಯಾರಿಗೆ ರಾಜೀನಾಮೆ ನೀಡಬೇಕು ಎಂಬ ಅರಿವಿರಬೇಕು ಎಂದು ಹೇಳುವ ಮೂಲಕ ಶಾಸಕ ಆನಂದ್ ಸಿಂಗ್ ಅವರು ತಮ್ಮ ರಾಜೀನಾಮೆ ಪತ್ರವನ್ನು ರಾಜ್ಯಪಾಲರಿಗೆ ನೀಡಿದ್ದಕ್ಕೆ ಪರೋಕ್ಷ ವಾಗ್ದಾಳಿ ನಡೆಸಿದ್ದಾರೆ.

ಸ್ಪೀಕರ್ ಕಚೇರಿಗೆ ರಾಜೀನಾಮೆ ಪತ್ರ ನೀಡಿದ್ದ ಶಾಸಕ ಆನಂದ್ ಸಿಂಗ್ ನಂತರ ನೇರವಾಗಿ ರಾಜಭವನಕ್ಕೆ ತೆರಳಿ ರಾಜ್ಯಪಾಲ ವಜುಭಾಯಿ ವಾಲಾ ಅವರಿಗೂ ರಾಜೀನಾಮೆ ಸಲ್ಲಿಸಿದ್ದರು. ಆದರೆ, ಆನಂದ್ ಸಿಂಗ್ ಅವರ ಈ ನಡೆ ಸ್ಪೀಕರ್ ರಮೇಶ್ ಕುಮಾರ್ ಅವರ ಆಕ್ರೋಶಕ್ಕೆ ಕಾರಣವಾಗಿದೆ.

ಶಾಸಕರ ರಾಜೀನಾಮೆ ಕುರಿತಂತೆ ಮಾಧ್ಯಮಗಳ ಜೊತೆ ಮಾತನಾಡಿದ ಅವರು, ಆನಂದ್ ಸಿಂಗ್ ರಾಜ್ಯಪಾಲರನ್ನು ಭೇಟಿಯಾಗಿ ರಾಜೀನಾಮೆ ನೀಡಿದ್ದಾರೆ ಎಂದರೆ ಬೇರೆ ಉದ್ದೇಶ ಇರಬೇಕು. ಅವರಿಗೆ ಸಮಯವಿದ್ದರೆ ರಾಷ್ಟ್ರಪತಿಗಳನ್ನು ಭೇಟಿಮಾಡಿ ರಾಜೀನಾಮೆ ನೀಡಲಿ ಎಂದು ಇದೇ ಸಂದರ್ಭದಲ್ಲಿ ಸ್ಪೀಕರ್ ರಮೇಶ್ ಕುಮಾರ್ ಮಾತಿನಲ್ಲೇ ಕುಟುಕಿದ್ದಾರೆ

ತಮಗೆ ಇಬ್ಬರು ಶಾಸಕರು ರಾಜೀನಾಮೆ ನೀಡಿಲ್ಲ. ಅಧಿಕೃತವಾಗಿ ಒಬ್ಬ ಶಾಸಕ ಮಾತ್ರ ರಾಜೀನಾಮೆ ನೀಡಿದ್ದಾರೆ. ಅವರ ರಾಜೀನಾಮೆಯನ್ನು ಪರಿಶೀಲಿಸುತ್ತೇನೆ. ಅದನ್ನು ಅಂಗೀಕರಿಸುವ ಅಥವಾ ಅನೂರ್ಜಿತಗೊಳಿಸುವ ಪರಮಾಧಿಕಾರ ನನಗೆ ಇಲ್ಲ, ಆದರೆ ಜವಾಬ್ದಾರಿ ಇದೆ ಎಂದರು.

ಶಾಸಕ ಆನಂದ್ ಸಿಂಗ್ ರಾಜೀನಾಮೆ ಕೊಟ್ಟಿದ್ದು ಜಿಂದಾಲ್ ವಿಚಾರಕ್ಕೆ ಅಲ್ಲ. ಜಿಂದಾಲ್ ಸಮಸ್ಯೆ ರಾಜೀನಾಮೆ ಕೊಡುವಷ್ಟು ದೊಡ್ಡ ಸಮಸ್ಯೆ ಕೂಡ ಅಲ್ಲ ಎಂದರು.